ಉಡುಪಿ ನ್ಯಾಯಾಲಯದ ವಾಚನಾಲಯದ ದುರಸ್ಥಿ

2629 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ನ್ಯಾಯಾಲಯದ ವಾಚನಾಲಯಗಳ ದುರಸ್ಥಿಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಆ) ವಾಚನಾಲಯಗಳಲ್ಲಿರುವ ಜರ್ನಲ್‌ಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಲಾಗುತ್ತಿದೆಯೇ? ಇಲ್ಲದಿದ್ದಲ್ಲಿ ಸರ್ಕಾರದವರು ಈ ಬಗ್ಗೆ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) ಉಡುಪಿ ನ್ಯಾಯಾಲಯದ ವಾಚನಾಲಯದ ದುರಸ್ತಿಯ ಅವಶ್ಯಕತೆ ಬಗ್ಗೆ ಪ್ರಸ್ತಾವನೆ ಸರ್ಕಾರಕ್ಕೆ ಬಂದಿರುವುದಿಲ್ಲ.

ಆ) ವಾಚನಾಲಯದ ಜರ್ನಲ್‌ಗಳ ಸಮರ್ಪಕ ನಿರ್ವಹಣೆ ಮಾಡಲಾಗುತ್ತಿದೆ.

ಉಡುಪಿಯಲ್ಲಿ ಕೋಳಿಮೊಟ್ಟೆ ಮತ್ತು ಮಾಂಸದ ಫಾರ್ಮ್ ಪ್ರಾರಂಭ

2628 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಉಡುಪಿಯಲ್ಲಿ ಕೋಳಿ ಮೊಟ್ಟೆ ಮತ್ತು ಮಾಂಸದ ಫಾರ್ಮ್‌ನ್ನು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದಿದ್ದು, ಅದು ಯಾವ ಹಂತದಲ್ಲಿದೆ?

ಆ) ಇದಕ್ಕೆ ಬೇಕಾಗುವ ಜಾಗ, ಬೇಡಿಕೆ ಬಹಳಷ್ಟು ಇರುವಾಗ ಈ ಬಗ್ಗೆ ಸರಕಾರ ಕ್ರಮ ತೆಗೆದುಕೊಳ್ಳಲು ವಿಳಂಬವೇಕೆ? ಯಾವಾಗ ಪ್ರಾರಂಭಿಸಲಾಗುವುದು (ವಿವರ ನೀಡುವುದು)?

ಶ್ರೀ ಬಿ.ಬಿ. ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು) :

ಅ) ಉಡುಪಿಯಲ್ಲಿ ಕೋಳಿಮೊಟ್ಟೆ ಮತ್ತು ಮಾಂಸದ ಫಾರ್ಮ್‌ನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರದ ಕೆರೆಗಳು

1124 - ಶ್ರೀ ಸಿ.ಹೆಚ್. ವಿಜಯಶಂಕರ್ (ಹುಣಸೂರು) : ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗ್ರಾಮೀಣ ಪ್ರದೇಶದಲ್ಲಿ ಗ್ರಾಮ, ಪಂಚಾಯ್ತಿ ವ್ಯಾಪ್ತಿಯಲ್ಲಿ ಬರದ ಕೆರೆಗಳನ್ನು ಮೀನುಗಾರಿಕೆಗೆ ಗುತ್ತಿಗೆ ಆಧಾರದ ಮೇಲೆ ನ್ಯಾಯಕ್ತವಾಗಿ ಒಬ್ಬರಿಗೆ ಗುತ್ತಿಗೆ ಕೊಡುವುದರಿಂದ ಅನೇಕ ರೀತಿಯ ಸಮಸ್ಯೆಗಳಿಗೆ ಕಾರಣವಾಗುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಶ್ರೀ ಕೆ. ಜಯಪ್ರಕಾಶ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು):